**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.899/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಲಕ್ಷಣ ಗೌಡ ಸಿ.ಹೆಚ್ | ಪ್ರಾಸಾ-5 |
| ತಂದೆಯ ಹೆಸರು | : ಎಸ್.ಡಿ ಪುಟ್ಟೇಗೌಡ | ಚಾಸಾ-9 |
| ವಯಸ್ಸು | : 56 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಎ.ಎಸ್.ಐ. | ದಿನಾಂಕಃ 09.10.2025. |
| ವಾಸಸ್ಥಳ | : ಹರಿಹರ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ದಿ.17.06.2019 ರಿಂದ ದಿ.30.07.2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.17.01.2022 ರಂದು ಚಾಸಾ-1 ರವರ ಹೇಳಿಕೆಯನ್ನು ಎಂ.ಜಿ.ಎಮ್. ಚಿಕ್ಕಮಗಳೂರಿನಲ್ಲಿ 17.30 ರಿಂದ 18.30 ರ ಸಮಯದವರೆಗೂ ಪಡೆದುಕೊಂಡಿರುತ್ತೇನೆ. ನಂತರ ಠಾಣೆಗೆ ಹಿಂತಿರುಗಿ ರಾ.22.00 ಗಂಟೆಗೆ ಠಾ.ಮೊ.ನಂ.4/2022 ರ ಕಲಂ 447, 504, 324, 323, 427, 354(ಬಿ), 506 ಸಹವಾಚಕ 34 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-11 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.17.01.2022 ರಂದು ನಿಪಿ-1 ರ ಆಧಾರದ ಮೇಲೆ ದಾಖಲಿಸಿಕೊಂಡ ಪ್ರ.ವ.ವ.ಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರ.ವ.ವ. ನಿಪಿ-8 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಸ್.ಬಿ.ಎ. ವಕೀಲರಿಂದಃ**

ಚಾಸಾ-1 ರವರ ಹೇಳಿಕೆಯನ್ನು ಸ.5.30 ರಿಂದ 6.30 ರವರೆಗೆ ಪಡೆದುಕೊಂಡಿರುತ್ತೇನೆ. ಸದರಿ ಹೇಳಿಕೆಯನ್ನು ಪಡೆದುಕೊಳ್ಳುವ ಪೂರ್ವದಲ್ಲಿ ಚಾಸಾ-1 ಮತ್ತು ಅವರ ಪತಿಯವರು ಇತರ ಪ್ರಕರಣಗಳನ್ನು ದಾಖಲು ಮಾಡಿರುತ್ತಾರೆ ಎಂದರೆ ಸರಿ. ಆ ದಿನ ಚಾಸಾ-1 ರವರು ಧರಿಸಿದ್ದ ಬಟ್ಟೆಗಳ ಬಗ್ಗೆ ನನಗೆ ನೆನಪಾಗುತ್ತಿಲ್ಲ. ನಾನು ಆ ದಿನ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆ ದಿನ ಚಾಸಾ-1 ರವರು ಆಸ್ಪತ್ರೆಗೆ ದಾಖಲಾದ ಸಮಯ ನನಗೆ ತಿಳಿದಿರುವುದಿಲ್ಲ. ಅದೇ ರೀತಿ ಇತರೆ ಆಸ್ಪತ್ರೆಯಲ್ಲಿ ದಾಖಲಾದ ಬಗ್ಗೆಯೂ ಮಾಹಿತಿ ಪಡೆದುಕೊಂಡಿರುವುದಿಲ್ಲ. ನಾನು ಹೇಳಿಕೆಯನ್ನು ಪಡೆದುಕೊಳ್ಳುವ ಸಮಯದಲ್ಲಿ ಚಾಸಾ-1 ರವರು ಮಾತ್ರ ಆಸ್ಪತ್ರೆಯಲ್ಲಿ ಇದ್ದರು. ಚಾಸಾ-1 ರವರ ಒತ್ತಡಕ್ಕೆ ಮಣಿದು ಅವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

<u>**ಮರು ವಿಚಾರಣೆ ಇಲ್ಲ**</u>

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.